ತೆಲುಗು ಚಿತ್ರರಂಗದಲ್ಲಿ 'ಮಾ ಇಂಟಿ ಬಂಗಾರಂ' ಸಿನಿಮಾ ಸದ್ಯ ಸೂಪರ್ ಹಿಟ್ ಆಗಿದೆ. ನಂದಿನಿ ರೆಡ್ಡಿ ನಿರ್ದೇಶನದ ಈ ಚಿತ್ರ ಬಾಕ್ಸ್ ಆಫೀಸ್‌ನಲ್ಲಿ ಭರ್ಜರಿ ಕಮಾಯಿ ಮಾಡುತ್ತಿದೆ. ಈ ಸಿನಿಮಾ ಇತ್ತೀಚಿನ ದಿನಗಳಲ್ಲಿ ಅತಿ ಹೆಚ್ಚು ಲಾಭ ತಂದುಕೊಟ್ಟ ಚಿತ್ರಗಳಲ್ಲಿ ಒಂದಾಗಿದೆ. ಸಾಮಾನ್ಯವಾಗಿ ಒಂದು ಸಿನಿಮಾ ಹಿಟ್ ಆದರೆ ಸೀಕ್ವೆಲ್ ಮಾಡುವುದು ಸಿನಿಮಾ ಇಂಡಸ್ಟ್ರಿಯ ಹಳೇ ಟೆಕ್ನಿಕ್ ಆಗಿದೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ

prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ









## ಕಾರು ಸ್ಫೋಟ: ಯುವಕ ಸಾವು

ತುಮಕೂರು: ಪ್ರೇಯಸಿಯನ್ನು ಅಪಹರಿಸಿ ಕರೆದೊಯ್ದ ಯುವಕನೊಬ್ಬ ತುಮಕೂರು ಜಿಲ್ಲೆಯ ಶಿರಾ ಸಮೀಪ ಕಾರಿನಲ್ಲೇ ಬಾಂಬ್ ಸ್ಫೋಟಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ರಾಜ್ಯಾದ್ಯಂತ ಸಂಚಲನ ಮೂಡಿಸಿದೆ. ಅಪಹರಣಕ್ಕೊಳಗಾಗಿದ್ದ ಯುವತಿ ರಮ್ಯಾ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದು, ಆರೋಪಿತ ನಾಗೇಂದ್ರ ಸ್ಫೋಟದಲ್ಲಿ ಸಜೀವ ದಹನವಾಗಿದ್ದಾನೆ.

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ಮೂಲದ ನಾಗೇಂದ್ರ ಮತ್ತು ಬೆಂಗಳೂರಿನ ರಾಜೀವ್ ಗಾಂಧಿ ಆಸ್ಪತ್ರೆಯಲ್ಲಿ ಲ್ಯಾಬ್ ಟೆಕ್ನಿಷಿಯನ್ ಆಗಿ ಕೆಲಸ ಮಾಡುತ್ತಿದ್ದ ರಮ್ಯಾ ಕಳೆದ ಆರು ವರ್ಷಗಳಿಂದ ಪರಸ್ಪರ ಪ್ರೀತಿಸುತ್ತಿದ್ದರು. ಆದರೆ ಮದುವೆ ವಿಚಾರವಾಗಿ ಇಬ್ಬರ ನಡುವೆ ಭಿನ್ನಾಭಿಪ್ರಾಯ ಉಂಟಾಗಿದ್ದು, ಇತ್ತೀಚೆಗೆ ಮನಸ್ತಾಪ ಹೆಚ್ಚಾಗಿತ್ತು ಎನ್ನಲಾಗಿದೆ.

ಮದುವೆಗೆ ಒಪ್ಪದಿದ್ದ ಕಾರಣ ಕೋಪಗೊಂಡ ನಾಗೇಂದ್ರ, ಬೆಂಗಳೂರಿನಲ್ಲಿರುವ ಯುವತಿಯ ವಸತಿ ನಿಲಯದ ಬಳಿ ಬಂದು ಆಕೆಯನ್ನು ಬಲವಂತವಾಗಿ ಬಾಡಿಗೆ ಕಾರಿನಲ್ಲಿ ಕೂರಿಸಿ ಅಪಹರಿಸಿದ್ದಾನೆ. ಈ ಬಗ್ಗೆ ಯುವತಿಯ ಸ್ನೇಹಿತೆ ಪೊಲೀಸರಿಗೆ ದೂರು ನೀಡಿದ್ದು, ಅಪಹರಣ ಪ್ರಕರಣ ದಾಖಲಾಗಿತ್ತು.

ಬೆಂಗಳೂರಿನಿಂದ ತುಮಕೂರು ಕಡೆಗೆ ತೆರಳುತ್ತಿದ್ದ ವೇಳೆ ಕಾರಿನೊಳಗೆ ಇಬ್ಬರ ನಡುವೆ ತೀವ್ರ ವಾಗ್ವಾದ ನಡೆದಿದೆ. ಈ ಸಂದರ್ಭದಲ್ಲಿ ನಾಗೇಂದ್ರ, "ನಿನ್ನನ್ನು ಕೊಂದು ನಾನು ಸಾಯುತ್ತೇನೆ" ಎಂದು ಬೆದರಿಕೆ ಹಾಕಿ, ಚಾಕುವಿನಿಂದ ಯುವತಿಯ ತಲೆ ಹಾಗೂ ಕೈ ಭಾಗಕ್ಕೆ ಗಾಯಗೊಳಿಸಿದ್ದಾನೆ ಎನ್ನಲಾಗಿದೆ.

ಪರಿಸ್ಥಿತಿ ಗಂಭೀರವಾಗುತ್ತಿರುವುದನ್ನು ಕಂಡ ಕಾರು ಚಾಲಕ ವಾಹನವನ್ನು ರಸ್ತೆ ಬದಿಯಲ್ಲಿ ನಿಲ್ಲಿಸಿದ್ದಾನೆ. ಇದೇ ವೇಳೆ ಅವಕಾಶ ಕಂಡುಕೊಂಡ ರಮ್ಯಾ ಕಾರಿನಿಂದ ಹೊರಗೆ ಜಿಗಿದು ತನ್ನ ಪ್ರಾಣ ಉಳಿಸಿಕೊಂಡಿದ್ದಾಳೆ. ಯುವತಿಯನ್ನು ರಕ್ಷಿಸಲು ಮುಂದಾದ ಚಾಲಕ ಕೂಡ ಸ್ಥಳದಿಂದ ದೂರ ಸರಿದಿದ್ದಾನೆ.

ಆ ಬಳಿಕ ಕಾರಿನೊಳಗೆ ಒಬ್ಬನೇ ಉಳಿದ ನಾಗೇಂದ್ರ, ತಾನು ಮೊದಲೇ ಸಿದ್ಧಪಡಿಸಿಕೊಂಡು ಬಂದಿದ್ದ ಸ್ಫೋಟಕವನ್ನು ಸ್ಫೋಟಿಸಿಕೊಂಡಿದ್ದಾನೆ. ಸ್ಫೋಟದ ತೀವ್ರತೆಗೆ ಕಾರು ಸಂಪೂರ್ಣ ಬೆಂಕಿಗಾಹುತಿಯಾಗಿದ್ದು, ನಾಗೇಂದ್ರ ಸ್ಥಳದಲ್ಲೇ ಸಜೀವ ದಹನಗೊಂಡಿದ್ದಾನೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸ್ಥಳದಲ್ಲಿ ಮತ್ತೊಂದು ಜೀವಂತ ಬಾಂಬ್ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಗಾಯಗೊಂಡಿರುವ ರಮ್ಯಾಗೆ ಚಿಕಿತ್ಸೆ ನೀಡಲಾಗುತ್ತಿದೆ.

ಈ ಪ್ರಕರಣವು ಪ್ರೇಮ ಸಂಬಂಧದ ವೈಮನಸ್ಸು ಹೇಗೆ ಭೀಕರ ದುರಂತಕ್ಕೆ ಕಾರಣವಾಗಬಹುದು ಎಂಬುದಕ್ಕೆ ಮತ್ತೊಂದು ಉದಾಹರಣೆಯಾಗಿದ್ದು, ಅಪಹರಣ, ಹಲ್ಲೆ ಹಾಗೂ ಸ್ಫೋಟದ ಆಯಾಮಗಳಲ್ಲಿ ಪೊಲೀಸರು ಸಮಗ್ರ ತನಿಖೆ ಮುಂದುವರಿಸಿದ್ದಾರೆ. ಸಿದ್ಧಾಪುರ ಹಾಗೂ ಕಳ್ಳಂಬೆಳ್ಳ ಪೊಲೀಸರು ಜಂಟಿಯಾಗಿ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ.

## ಪ್ರದೀಪ್ ಈಶ್ವರ್‌ಗೆ ಚಪ್ಪಲಿ ಎಸೆತ

ಚಿಕ್ಕಬಳ್ಳಾಪುರ: ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ಕಾರ್ಯಕ್ರಮದ ವೇಳೆ ಚಿಕ್ಕಬಳ್ಳಾಪುರದಲ್ಲಿ ರಾಜಕೀಯ ಉದ್ವಿಗ್ನತೆ ತಾರಕಕ್ಕೇರಿದ ಘಟನೆ ನಡೆದಿದೆ. ನಗರದ ಕನ್ನಡ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಪ್ರದೀಪ್ ಈಶ್ವರ್ ಭಾಗವಹಿಸಿದ್ದ ವೇಳೆ ಕೆಲವರು ಅವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಗಲಾಟೆ ನಡೆಸಿದರು.

ಕಾರ್ಯಕ್ರಮದ ವೇಳೆ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಹಾಗೂ ಸಂಸದ ಡಾ.ಕೆ.ಸುಧಾಕರ್ ಬೆಂಬಲಿಗರು ಎನ್ನಲಾದ ಕೆಲವರು, ಶಾಸಕ ಪ್ರದೀಪ್ ಈಶ್ವರ್ ಅವರನ್ನು ವೇದಿಕೆಯಿಂದ ಕೆಳಗಿಳಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಇದರಿಂದ ಕೆಲಕಾಲ ಕಾರ್ಯಕ್ರಮದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಯಿತು.

ಘಟನಾ ಸ್ಥಳದಲ್ಲಿದ್ದ ಚಿಕ್ಕಬಳ್ಳಾಪುರ ಆದಿಚುಂಚನಗಿರಿ ಶಾಖಾ ಮಠದ ಸ್ವಾಮೀಜಿಗಳು ಪರಿಸ್ಥಿತಿಯನ್ನು ಶಾಂತಗೊಳಿಸಲು ಪ್ರಯತ್ನಿಸಿದರೂ, ಪ್ರತಿಭಟನಾಕಾರರು ತಮ್ಮ ಆಕ್ರೋಶವನ್ನು ಮುಂದುವರಿಸಿದರು. ಪರಿಸ್ಥಿತಿ ಹದಗೆಡುತ್ತಿದ್ದಂತೆ ಶಾಸಕ ಪ್ರದೀಪ್ ಈಶ್ವರ್ ತಮ್ಮ ಬೆಂಬಲಿಗರೊಂದಿಗೆ ಕಾರ್ಯಕ್ರಮದಿಂದ ಹೊರನಡೆದರು.

ಕಾರ್ಯಕ್ರಮದ ಬಳಿಕ ಕನ್ನಡ ಭವನದ ಮುಂಭಾಗದಲ್ಲಿ ಪ್ರದೀಪ್ ಈಶ್ವರ್ ಬೆಂಬಲಿಗರು ಮತ್ತು ಒಕ್ಕಲಿಗ ಯುವಕರ ನಡುವೆ ವಾಗ್ವಾದ ಹಾಗೂ ತಳ್ಳಾಟ ನಡೆದಿದೆ. ಶಾಸಕರ ಕಾರಿನ ಮೇಲೆ ಚಪ್ಪಲಿ ತೂರಿದ ಘಟನೆಯೂ ನಡೆದಿದೆ. ಕೆಲಕಾಲ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ಜನರನ್ನು ನಿಯಂತ್ರಿಸಲು ಪೊಲೀಸರು ಮಧ್ಯಪ್ರವೇಶಿಸಿ ಲಘು ಲಾಠಿ ಪ್ರಹಾರ ನಡೆಸಿದರು.

ಮಾಗಡಿಯಲ್ಲಿರುವ ನಾಡಪ್ರಭು ಕೆಂಪೇಗೌಡರ ಸಮಾಧಿ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ 10 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಆರಂಭವಾಗಿದ್ದು, ಈಗಾಗಲೇ 5.5 ಎಕರೆ ಜಮೀನು ಖರೀದಿಸಲಾಗಿದೆ ಎಂದು ಮಾಹಿತಿ ನೀಡಿದರು. ಮಾಗಡಿ ಕೋಟೆಯ ಅಭಿವೃದ್ಧಿಗೆ ರೂ.100 ಕೋಟಿ ವೆಚ್ಚದ ಯೋಜನೆ ರೂಪಿಸಲಾಗಿದೆ. ಜೊತೆಗೆ ಬೆಂಗಳೂರಿನಲ್ಲಿ 15 ಲಕ್ಷ ಸಸಿ ನೆಡುವ ಅಭಿಯಾನ ಹಾಗೂ ವಿವಿಧ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

# ಬೆಂಗಳೂರಿಗೆ ಕೆಂಪೇಗೌಡರ ಕೊಡುಗೆ ಅನನ್ಯ

ಬೆಂಗಳೂರು: ಬೆಂಗಳೂರು ನಿರ್ಮಾತೃ, ಸರ್ವಜನಾಂಗದ ನಾಯಕ ಹಾಗೂ ದೂರದೃಷ್ಟಿಯ ಆಡಳಿತಗಾರ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ರಾಜ್ಯ ಸರ್ಕಾರ ವಿಜೃಂಭಣೆಯಿಂದ ಆಚರಿಸಿತು.

ದೇವನಹಳ್ಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪವಿರುವ 108 ಅಡಿ ಎತ್ತರದ ನಾಡಪ್ರಭು ಕೆಂಪೇಗೌಡರ ಕಂಚಿನ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಮುಖ್ಯಮಂತ್ರಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ, ಸ್ಫಟಿಕಪುರಿ ನಂಜಾವಧೂತ ಸ್ವಾಮೀಜಿ ಹಾಗೂ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ನಿಶ್ಚಲಾನಂದನಾಥ ಮಹಾಸ್ವಾಮೀಜಿ ಉಪಸ್ಥಿತರಿದ್ದರು.

ನಂತರ ಮಾತನಾಡಿದ ಮುಖ್ಯಮಂತ್ರಿ, "ದೂರದೃಷ್ಟಿಯ ಮಹಾಚೇತನ ಕೆಂಪೇಗೌಡರನ್ನು ಸ್ಮರಿಸುವ ಅವಕಾಶ ದೊರೆತಿರುವುದು ನಮ್ಮೆಲ್ಲರ ಭಾಗ್ಯ. ಅವರ ಚಿಂತನೆ, ಆಚಾರ-ವಿಚಾರ ಮತ್ತು ಅಭಿವೃದ್ಧಿ ದೃಷ್ಟಿಕೋನವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ" ಎಂದು ಹೇಳಿದರು.

ಬೆಂಗಳೂರಿಗೆ ಆಗಮಿಸುವ ದೇಶ-ವಿದೇಶದ ಪ್ರವಾಸಿಗರಿಗೆ ಕೆಂಪೇಗೌಡರ ಇತಿಹಾಸ ಮತ್ತು ಕೊಡುಗೆಗಳನ್ನು ಪರಿಚಯಿಸಲು ವಿಶೇಷ ಕಾರ್ಯಯೋಜನೆ ರೂಪಿಸಲು ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ಟ್ರಂಪೆಟ್ ಜಂಕ್ಷನ್ ಪ್ರದೇಶದಲ್ಲಿ ಕೆಂಪೇಗೌಡರ ಕುರಿತು ಮಾಹಿತಿ ನೀಡುವ ವ್ಯವಸ್ಥೆ ರೂಪಿಸುವ ಕುರಿತು ಯೋಜನೆ ಸಿದ್ಧವಾಗುತ್ತಿದೆ ಎಂದರು.

ಮಾಗಡಿಯಲ್ಲಿರುವ ನಾಡಪ್ರಭು ಕೆಂಪೇಗೌಡರ ಸಮಾಧಿ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ 10 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಆರಂಭವಾಗಿದ್ದು, ಈಗಾಗಲೇ 5.5 ಎಕರೆ ಜಮೀನು ಖರೀದಿಸಲಾಗಿದೆ ಎಂದು ಮಾಹಿತಿ ನೀಡಿದರು.

ಮಾಗಡಿ ಕೋಟೆಯ ಅಭಿವೃದ್ಧಿಗೆ ರೂ.100 ಕೋಟಿ ವೆಚ್ಚದ ಯೋಜನೆ ರೂಪಿಸಲಾಗಿದೆ. ಜೊತೆಗೆ ಬೆಂಗಳೂರಿನಲ್ಲಿ 15 ಲಕ್ಷ ಸಸಿ ನೆಡುವ ಅಭಿಯಾನ ಹಾಗೂ ವಿವಿಧ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.



ಇನ್ನು ಮುಂದೆ ಕೆಂಪೇಗೌಡ ಜಯಂತಿಯನ್ನು ಕೇವಲ ವಿಧಾನಸೌಧ ಅಥವಾ ಕೇಂದ್ರ ಸ್ಥಳಗಳಿಗೆ ಸೀಮಿತಗೊಳಿಸದೆ, ಬೆಂಗಳೂರಿನ 28 ವಿಧಾನಸಭಾ ಕ್ಷೇತ್ರಗಳಲ್ಲಿ ಕ್ರಮವಾಗಿ ಆಚರಿಸಲು ತೀರ್ಮಾನಿಸಲಾಗಿದೆ. ಪ್ರತಿವರ್ಷ ಒಂದೊಂದು ಕ್ಷೇತ್ರದಲ್ಲಿ ರಾಜ್ಯಮಟ್ಟದ ಕಾರ್ಯಕ್ರಮ ಆಯೋಜಿಸುವ ಮೂಲಕ ಮುಂದಿನ 28 ವರ್ಷಗಳ ಕಾಲ ಈ ಆಚರಣೆಯನ್ನು ವಿಸ್ತರಿಸಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದರು.

ಕೆಂಪೇಗೌಡರನ್ನು ಯಾವುದೇ ಒಂದು ಸಮುದಾಯಕ್ಕೆ ಸೀಮಿತಗೊಳಿಸಬಾರದು. ಅವರು ಸರ್ವಜನಾಂಗದ ನಾಯಕರು ಮತ್ತು ಎಲ್ಲ ವರ್ಗಗಳ ಆಸ್ತಿಯಾಗಿದ್ದಾರೆ. ಅವರ ಆಡಳಿತ ತತ್ವಗಳು, ಅಭಿವೃದ್ಧಿ ದೃಷ್ಟಿಕೋನ ಮತ್ತು ಜನಪರ ಮೌಲ್ಯಗಳು ಇಂದಿಗೂ ಪ್ರಸ್ತುತವಾಗಿದ್ದು, ಬೆಂಗಳೂರಿನ ಭವಿಷ್ಯದ ಅಭಿವೃದ್ಧಿಗೆ ಮಾರ್ಗದರ್ಶಿಯಾಗಿವೆ ಎಂದು ಮುಖ್ಯಮಂತ್ರಿ ಹೇಳಿದರು.

ಬೆಂಗಳೂರಿನಲ್ಲಿ ಜನಸಂಖ್ಯೆ ಮತ್ತು ವಾಹನಗಳ ಸಂಖ್ಯೆ ವೇಗವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ.

ವಿಮಾನ ನಿಲ್ದಾಣಕ್ಕೆ ಮೆಟ್ರೋ ಸಂಪರ್ಕ ಕಲ್ಪಿಸುವ ಯೋಜನೆಗೆ ವೇಗ ನೀಡಲಾಗುತ್ತಿದ್ದು, ಮುಂದಿನ ವರ್ಷಗಳಲ್ಲಿ ಮೆಟ್ರೋ ಜಾಲ ವಿಸ್ತರಣೆಗೆ ಮಹತ್ವಾಕಾಂಕ್ಷಿ ಯೋಜನೆಗಳನ್ನು ರೂಪಿಸಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಚಿವ ಕೃಷ್ಣ ಬೈರೇಗೌಡ ಸೇರಿದಂತೆ ವಿವಿಧ ಗಣ್ಯರು, ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಸಾವಿರಾರು ಸಾರ್ವಜನಿಕರು ಭಾಗವಹಿಸಿ ನಾಡಪ್ರಭು ಕೆಂಪೇಗೌಡರಿಗೆ ಗೌರವ ನಮನ ಸಲ್ಲಿಸಿದರು.

## 2.98 ಕೋಟಿ ರೂ. ನಗದು ವಶ

ಬೆಂಗಳೂರು: ರಾಜಧಾನಿ ಬೆಂಗಳೂರಿನಲ್ಲಿ ದಾಖಲೆಗಳಿಲ್ಲದ ಬರೋಬ್ಬರಿ ರೂ.2.98 ಕೋಟಿ ನಗದು ಪತ್ತೆಯಾಗಿರುವ ಪ್ರಕರಣ ಸಂಚಲನ ಸೃಷ್ಟಿಸಿದೆ. ಕುರುಬರಹಳ್ಳಿಯ ಕೈಗಾರಿಕಾ ಶೆಡ್ ಒಂದರಲ್ಲಿ ನಾಲ್ಕು ದೊಡ್ಡ ಬ್ಯಾಗ್‌ಗಳಲ್ಲಿ ಬಚ್ಚಿಡಲಾಗಿದ್ದ ನಗದನ್ನು ಮಹಾಲಕ್ಷ್ಮಿ ಲೇಔಟ್ ಠಾಣೆ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಜೂನ್ 26ರಂದು ಗಸ್ತಿನಲ್ಲಿದ್ದ ಪೊಲೀಸರಿಗೆ ಖಚಿತ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಶೆಡ್ ಮೇಲೆ ದಾಳಿ ನಡೆಸಲಾಗಿತ್ತು. ತಪಾಸಣೆ ವೇಳೆ ಕೋಟ್ಯಂತರ ರೂಪಾಯಿ ನೋಟುಗಳ ಕಂತೆಗಳು ಪತ್ತೆಯಾಗಿದ್ದು, ಲೆಕ್ಕ ಹಾಕಿದಾಗ ಒಟ್ಟು ರೂ.2,98,00,900 ನಗದು ಇರುವುದು ದೃಢಪಟ್ಟಿದೆ.

ಪ್ರಾಥಮಿಕ ತನಿಖೆಯಲ್ಲಿ ಈ ಹಣ ತಾವರೆಕೆರೆ ನಿವಾಸಿ ನಾಗರಾಜ್‌ಗೆ ಸೇರಿದ್ದು, ಸ್ನೇಹಿತ ವೆಂಕಟೇಶ್‌ಗೆ ಸೇರಿದ ಶೆಡ್‌ನಲ್ಲಿ ಬಚ್ಚಿಡಲಾಗಿತ್ತು ಎಂಬ ಮಾಹಿತಿ ಲಭ್ಯವಾಗಿದೆ. ಪ್ರಕರಣದ ಮಾಹಿತಿ ನೀಡಿದ ಬಳಿಕ ಆದಾಯ ತೆರಿಗೆ ಇಲಾಖೆಯ ಸಹಯೋಗದಲ್ಲಿ ಪೊಲೀಸರು ಎಫ್‌ಐಆರ್ ದಾಖಲಿಸಿ ಇಬ್ಬರನ್ನು ಬಂಧಿಸಿದ್ದಾರೆ.

## ಶೀಘ್ರ ಬಸ್ ದರ ಏರಿಕೆ...!

ಬೆಂಗಳೂರು: ರಾಜ್ಯದಲ್ಲಿ ಸರ್ಕಾರಿ ಬಸ್ ಪ್ರಯಾಣಿಕರಿಗೆ ಟಿಕೆಟ್ ದರ ಏರಿಕೆಯ ಸಾಧ್ಯತೆ ಎದುರಾಗಿದ್ದು, ಸಾರಿಗೆ ಸಚಿವ ಬೈರತಿ ಸುರೇಶ್ ಈ ಕುರಿತು ಮಹತ್ವದ ಸುಳಿವು ನೀಡಿದ್ದಾರೆ. ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಭಾರೀ ನಷ್ಟದಲ್ಲಿರುವ ಹಿನ್ನೆಲೆಯಲ್ಲಿ, ಡೀಸೆಲ್ ದರ ಏರಿಕೆಗೆ ಅನುಗುಣವಾಗಿ ಬಸ್ ಟಿಕೆಟ್ ದರ ಹೆಚ್ಚಳದ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.





ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, "ಕೇಂದ್ರ ಕಾರಣ, ರಾಜ್ಯ ಕಾರಣ ಎಂದು ಹೇಳುವುದಿಲ್ಲ. ಇಡೀ ದೇಶದಲ್ಲೇ ತೈಲ ದರ ಹೆಚ್ಚಾಗಿದೆ. ಅದಕ್ಕೆ ಅನುಪಾತವಾಗಿ ಟಿಕೆಟ್ ದರ ಹೆಚ್ಚಿಸುವ ಪ್ರಸ್ತಾವನೆ ಇದೆ. ಆದರೆ, ಅದು ಇನ್ನೂ ಪರಿಶೀಲನೆಯಲ್ಲಿದ್ದು, ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಸರ್ಕಾರ ಅಂತಿಮ ತೀರ್ಮಾನ ಕೈಗೊಳ್ಳಲಿದೆ" ಎಂದು ಹೇಳಿದರು.

ಬಸ್ ಟಿಕೆಟ್ ದರ ಹೆಚ್ಚಳವನ್ನು ವಿರೋಧಿಸುವುದಕ್ಕೆ ಕಾರಣವಿಲ್ಲ ಎಂದು ಹೇಳಿದ ಅವರು, "ಬಿಜೆಪಿಯವರಿಗೂ ತೈಲ ದರ ಏರಿಕೆಯಾಗಿರುವುದು ಗೊತ್ತಿದೆ. ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಒಟ್ಟಾರೆ ಸುಮಾರು ರೂ.5,000 ಕೋಟಿ ನಷ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆ. ಸಿಬ್ಬಂದಿಗೆ ವೇತನ ನೀಡಬೇಕು, ಬಸ್‌ಗಳಿಗೆ ಡೀಸೆಲ್ ತುಂಬಿಸಬೇಕು. ಈ ಎಲ್ಲ ವಿಚಾರಗಳನ್ನು ಗಮನದಲ್ಲಿಟ್ಟುಕೊಂಡು ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುತ್ತದೆ" ಎಂದು ಸ್ಪಷ್ಟಪಡಿಸಿದರು. ವಿದ್ಯಾರ್ಥಿಗಳ ಉಚಿತ ಬಸ್ ಪಾಸ್ ವಿತರಣೆಯಲ್ಲಿ ಯಾವುದೇ ಸಮಸ್ಯೆ ಇಲ್ಲ ಎಂದು ಸಚಿವರು ಸ್ಪಷ್ಟನೆ ನೀಡಿದರು. "ಪಾಸ್ ವಿತರಣೆಯನ್ನು ಮತ್ತಷ್ಟು ಸುಗಮಗೊಳಿಸಲಾಗುತ್ತದೆ. ಎಲ್ಲ ಅರ್ಹ ವಿದ್ಯಾರ್ಥಿಗಳಿಗೂ ಉಚಿತ ಪಾಸ್ ನೀಡಲಾಗುವುದು" ಎಂದು ಭರವಸೆ ನೀಡಿದರು.

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ವಿಪಕ್ಷಗಳು ರಾಜಕೀಯ ಮಾಡಬಾರದು ಎಂದು ಸಚಿವ ಬೈರತಿ ಸುರೇಶ್ ಹೇಳಿದರು. "ಯಾವುದೇ ಸಮಸ್ಯೆಯಿದ್ದರೂ ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಬೇಕು. ಇತಿಹಾಸದಲ್ಲಿ ಮುಖ್ಯಮಂತ್ರಿ ಮತ್ತು ಕೇಂದ್ರ ಸಚಿವರು ಬಹಿರಂಗವಾಗಿ ಚರ್ಚೆ ನಡೆಸಿದ ಉದಾಹರಣೆ ಇದೆಯೇ? ಸಾರ್ವಜನಿಕವಾಗಿ ಚರ್ಚೆಗೆ ಬನ್ನಿ ಎನ್ನುವುದು ರಾಜ್ಯದ ಘನತೆಗೆ ಧಕ್ಕೆ ತರುತ್ತದೆ" ಎಂದು ಅವರು ವಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು. ಸದ್ಯ ಬಸ್ ಟಿಕೆಟ್ ದರ ಏರಿಕೆ ಕುರಿತು ಯಾವುದೇ ಅಂತಿಮ ನಿರ್ಧಾರವಾಗಿಲ್ಲ. ಸರ್ಕಾರದ ಮಟ್ಟದಲ್ಲಿ ಚರ್ಚೆಯಾದ ಬಳಿಕ ಅಧಿಕೃತ ಘೋಷಣೆ ಹೊರಬೀಳುವ ಸಾಧ್ಯತೆ ಇದೆ.

## ಇರಾನ್ ಸೇನಾ ನೆಲೆಗಳ ಮೇಲೆ ಅಮೆರಿಕ ದಾಳಿ; ಕದನ ವಿರಾಮ ಉಲ್ಲಂಘನೆ ಆರೋಪ

ಟೆಹ್ರಾನ್: ಹಾರ್ಮುಜ್ ಜಲಸಂಧಿಯಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಅಮೆರಿಕದ ಪಡೆಗಳು ಇರಾನಿನ ಕ್ಷಿಪಣಿ ಮತ್ತು ಡ್ರೋನ್ ಸಂಗ್ರಹಣಾ ನೆಲೆಗಳು ಹಾಗೂ ಕರಾವಳಿ ರಾಡಾರ್ ಕೇಂದ್ರಗಳ ಮೇಲೆ ದಾಳಿ ನಡೆಸಿವೆ. ಕದನ ವಿರಾಮ ಉಲ್ಲಂಘನೆ ಮತ್ತು ವಾಣಿಜ್ಯ ಹಡಗುಗಳ ಮೇಲಿನ ದಾಳಿಗೆ ಪ್ರತಿಕ್ರಿಯೆಯಾಗಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ತಿಳಿಸಿದೆ.

ಹಾರ್ಮುಜ್ ಜಲಸಂಧಿಯಲ್ಲಿ ಸಂಚರಿಸುತ್ತಿದ್ದ ವಾಣಿಜ್ಯ ಹಡಗಿನ ಮೇಲೆ ನಿನ್ನೆ ನಡೆದ ಡ್ರೋನ್ ದಾಳಿಯ ಬಳಿಕ ಅಮೆರಿಕ ಈ ಪ್ರತಿದಾಳಿ ನಡೆಸಿದೆ. ಇರಾನಿನ ಪಡೆಗಳು ಕದನ ವಿರಾಮವನ್ನು ಸ್ಪಷ್ಟವಾಗಿ ಉಲ್ಲಂಘಿಸಿದ್ದು, ವಾಣಿಜ್ಯ ಸಾಗಣೆಯ ವಿರುದ್ಧ ನಡೆಸಿದ ಆಕ್ರಮಣಕ್ಕೆ ತಕ್ಕ ಉತ್ತರವಾಗಿ ಈ ದಾಳಿಗಳು ನಡೆದಿವೆ ಎಂದು ಅಮೆರಿಕ ಹೇಳಿದೆ.



ದಕ್ಷಿಣ ಬಂದರು ನಗರ ತಹೆರೋಯೆ ಪಿಯರ್‌ನಲ್ಲಿ ಶುಕ್ರವಾರ ತಡರಾತ್ರಿ ಭಾರೀ ಸ್ಫೋಟದ ಶಬ್ದ ಕೇಳಿಬಂದಿದೆ ಎಂದು ಸಿರಿಕ್‌ನ ವರದಿಗಾರರನ್ನು ಉಲ್ಲೇಖಿಸಿ ಇರಾನ್ ಸರ್ಕಾರಿ ದೂರದರ್ಶನ ವರದಿ ಮಾಡಿದೆ. ದಾಳಿಯಿಂದ ಉಂಟಾದ ಹಾನಿಯ ಬಗ್ಗೆ ಅಧಿಕೃತ ಮಾಹಿತಿ ಇನ್ನಷ್ಟೇ ನಿರೀಕ್ಷಿಸಲಾಗಿದೆ.

ಈ ಬೆಳವಣಿಗೆಯ ಬೆನ್ನಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ವಾಣಿಜ್ಯ ಹಡಗಿನ ಮೇಲೆ ನಡೆದಿರುವ ಡ್ರೋನ್ ದಾಳಿಯನ್ನು ತೀವ್ರವಾಗಿ ಖಂಡಿಸಿ, "ಇದು ಕದನ ವಿರಾಮ ಒಪ್ಪಂದದ ಸ್ಪಷ್ಟ ಮತ್ತು ಗಂಭೀರ ಉಲ್ಲಂಘನೆ" ಎಂದು ಆರೋಪಿಸಿದ್ದರು.

ಇದಕ್ಕೂ ಮುನ್ನ ಹಾರ್ಮುಜ್ ಜಲಸಂಧಿಯ ಮೂಲಕ ಅನುಮತಿಯಿಲ್ಲದೆ ಹಡಗುಗಳು ಸಂಚರಿಸಬಾರದು ಎಂದು ಇರಾನ್ ಎಚ್ಚರಿಕೆ ನೀಡಿತ್ತು. ಆದಾಗ್ಯೂ, ಹಲವು ವಾಣಿಜ್ಯ ಹಡಗುಗಳು ಸಂಚಾರ ಮುಂದುವರಿಸಿದ್ದು, ಕೆಲವು ಹಡಗುಗಳು ಇರಾನ್ ಸೂಚಿಸದ ಮಾರ್ಗವನ್ನು ಬಳಸಿರುವುದು ವರದಿಯಾಗಿದೆ. ಕೆಪ್ಲರ್ ಟ್ರ್ಯಾಕಿಂಗ್ ಪ್ಲಾಟ್‌ಫಾರ್ಮ್ ಮಾಹಿತಿ ಪ್ರಕಾರ, ಗುರುವಾರ ಹಾರ್ಮುಜ್ ಜಲಸಂಧಿ ಮೂಲಕ ಸಂಚರಿಸಿದ 42 ಹಡಗುಗಳಲ್ಲಿ ಅರ್ಧದಷ್ಟು ಹಡಗುಗಳು ಒಮಾನ್ ಕರಾವಳಿಯ ಅನುಮೋದಿಸದ ದಕ್ಷಿಣ ಮಾರ್ಗವನ್ನು ಬಳಸಿವೆ.

ಹಾರ್ಮುಜ್ ಜಲಸಂಧಿಯಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ ಜಾಗತಿಕ ತೈಲ ಸಾಗಣೆ ಮತ್ತು ಸಮುದ್ರ ಭದ್ರತೆ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ, ವಿಶ್ವದ ಗಮನ ಈ ಪ್ರದೇಶದತ್ತ ನೆಟ್ಟಿದೆ.

ಭಾರತ ಸಾರಥಿ 27/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

### ನೂತನ ಪದಾಧಿಕಾರಿಗಳ

# ಪದಗ್ರಹಣ

ದೇವನಹಳ್ಳಿ

ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹಿಳಾ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ನಡೆಯಿತು.

ನೂತನ ಅಧ್ಯಕ್ಷರಾಗಿ ಮೀನಾಕ್ಷಿ ಮುನಿಕೃಷ್ಣಪ್ಪ, ಕಾರ್ಯಾಧ್ಯಕ್ಷರಾಗಿ ಬಿ.ಪಿ. ಭಾಗ್ಯಮ್ಮ ಬೀರಪ್ಪ ಹಾಗೂ ಮಹಾಪ್ರಧಾನ ಕಾರ್ಯದರ್ಶಿಯಾಗಿ ಕೆ.ಬಿ. ಶೈಲಜಾ ಮಾರೇಗೌಡ ಅಧಿಕಾರ ಸ್ವೀಕರಿಸಿದರು.

ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಅವರ ಉಪಸ್ಥಿತಿಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಕೆ.ವಿ. ಮಂಜುನಾಥ್ ಹಾಗೂ ತಾಲೂಕು ಅಧ್ಯಕ್ಷ ಮಹೇಶ್ ಅವರು ನೂತನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿ ಶುಭ ಹಾರೈಸಿದರು.

ಮಹಿಳಾ ಶಕ್ತಿಯೇ ಪಕ್ಷದ ಪ್ರಮುಖ ಬಲವಾಗಿದ್ದು, ನೂತನ ತಂಡದ ನೇತೃತ್ವದಲ್ಲಿ ಮಹಿಳಾ ಘಟಕವು ಜನಪರ ಕಾರ್ಯಕ್ರಮಗಳ ಮೂಲಕ ಇನ್ನಷ್ಟು ಬಲವಾಗಿ ಮುಂದುವರಿಯಬೇಕು ಎಂದು ಮುಖಂಡರು ಆಶಿಸಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ಹಿರಿಯ ಮುಖಂಡರು ಹಾಗೂ ನೂರಾರು ಮಹಿಳಾ ಕಾರ್ಯಕರ್ತರು ಉಪಸ್ಥಿತರಿದ್ದರು.

### ಬಸ್ ಪಾಸ್ ಪಡೆದಿದ್ದ ವಿದ್ಯಾರ್ಥಿಗಳಿಗೆ

# ಶುಲ್ಕ ಮರು ಪಾವತಿ

ತುಮಕೂರು

ರಾಜ್ಯ ಸರ್ಕಾರವು ಶಾಲಾ-ಕಾಲೇಜುಗಳ ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸಲು ಹಾಗೂ ಈಗಾಗಲೇ ಶುಲ್ಕ ಪಾವತಿಸಿಕೊಂಡು ವಿತರಿಸಿರುವ ಬಸ್‌ಪಾಸ್ ಮೊತ್ತವನ್ನು ಮರು ಪಾವತಿಸಲು ಅನುಮೋದಿಸಿರುವ ಹಿನ್ನಲೆಯಲ್ಲಿ ಜೂನ್ 29 ರಿಂದ ಸೇವಾಸಿಂಧು ಪೋರ್ಟಲ್ ಮೂಲಕ ಶುಲ್ಕ ಪಾವತಿಸಿ ಬಸ್ ಪಾಸುಗಳನ್ನು ಪಡೆದಿರುವ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಸೌಲಭ್ಯ ಕಲ್ಪಿಸಲಾಗುವುದು.

ವಿದ್ಯಾರ್ಥಿಗಳು https://sevasindhuservices.karnataka.gov.in/buspassservices/ ಪೋರ್ಟಲ್ ಮೂಲಕ ಮೊಬೈಲ್ ಸಂಖ್ಯೆ /ಒಟಿಪಿ ನಮೂದಿಸಿ ವಿದ್ಯಾರ್ಥಿಗಳ ಆಧಾರ್ ಇ-ಕೆವೈಸಿ ಪೂರ್ಣಗೊಳಿಸಿ ತಮ್ಮ ಅಥವಾ ತಮ್ಮ ಪೋಷಕರ ಬ್ಯಾಂಕ್ ಖಾತೆ ವಿವರಗಳನ್ನು ತಂತ್ರಾಂಶದಲ್ಲಿ ನಮೂದಿಸುವ ಮೂಲಕ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ 7 ದಿನಗಳ ಒಳಗೆ ವಿದ್ಯಾರ್ಥಿಗಳು ನೀಡಿದ ಬ್ಯಾಂಕ್ ಖಾತೆಗೆ ಮೂಲಕ ಪಾಸ್ ಮೊತ್ತ ಮರುಪಾವತಿಯಾಗುತ್ತದೆ ಹಾಗೂ ಈ ಬಗ್ಗೆ ವಿದ್ಯಾರ್ಥಿಗಳು ನೀಡಿರುವ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ರವಾನೆಯಾಗುತ್ತದೆ. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ ನಂತರ ಬಸ್ ಪಾಸಿನ ಶುಲ್ಕ ನೇರವಾಗಿ ಬ್ಯಾಂಕ್ ಖಾತೆಗೆ ಆನ್‌ಲೈನ್ ಮೂಲಕ ಜಮೆಯಾಗುವುದರಿಂದ ಈ ಸಂಬಂಧ ವಿದ್ಯಾರ್ಥಿಗಳು ಯಾವುದೇ ಕಚೇರಿ/ಕೌಂಟರ್‌ಗಳಿಗೆ ಭೇಟಿ ನೀಡುವ ಅವಶ್ಯಕತೆ ಇರುವುದಿಲ್ಲ ಎಂದು ತುಮಕೂರು ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾರ್ತಾಲಾಪ ಕಾರ್ಯಗಾರ

ಕೋಲಾರ

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಭಾರತ ಸರ್ಕಾರದ ವಾರ್ತಾ ಶಾಖೆ ಇದೇ 02ರ ಜುಲೈ 2026ರಂದು ಕೋಲಾರದ ಮಾಧ್ಯಮ ಪ್ರತಿನಿಧಿಗಳಿಗಾಗಿ ಒಂದು ದಿನದ "ವಾರ್ತಾಲಾಪ" ಕಾರ್ಯಗಾರವನ್ನು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಕೇಂದ್ರದಲ್ಲಿ ಆಯೋಜಿಸಲಾಗುತ್ತಿದೆ.

"ವಾರ್ತಾಲಾಪ"ದಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಕೇಂದ್ರ ಪುರಸ್ಕೃತ ಕಾರ್ಯಕ್ರಮಗಳು ಹಾಗೂ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ಯೋಜನೆಗಳ ಕುರಿತು ಮಾಹಿತಿ ನೀಡುವ ಉದ್ದೇಶವನ್ನು ಹೊಂದಲಾಗಿದೆ. ಜಿಲ್ಲಾ ಮತ್ತು ಗ್ರಾಮೀಣ ಭಾಗದಲ್ಲಿ ಯೋಜನೆಗಳ ಅನುಷ್ಠಾನದ ಕುರಿತು ಮಾಧ್ಯಮ ಪ್ರತಿನಿಧಿಗಳಿಗಾಗಿ ಅಗತ್ಯ ಮಾಹಿತಿಯನ್ನು ಒದಗಿಸುವ ಧ್ಯೇಯೋದ್ದೇಶವನ್ನು ಹೊಂದಲಾಗಿದೆ.

ವಾರ್ತಾಲಾಪದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಮಾಧ್ಯಮ ಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗಿಯಾಗಿ ತಮ್ಮ ಅಭಿಪ್ರಾಯ ಮತ್ತು ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಕಾರ್ಯಗಾರದಲ್ಲಿ ಕೇಂದ್ರ ಸರ್ಕಾರವು ಕಳೆದ 12 ವರ್ಷಗಳಿಂದ ರೈತರು, ಮಹಿಳೆಯರು, ಯುವಸಮೂಹ, ವಂಚಿತ ವರ್ಗಗಳ ಸಶಕ್ತಿಕರಣದ ಕುರಿತು ಕೈಗೊಂಡ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳ ಕುರಿತು ಮಾಹಿತಿಯನ್ನು ನೀಡಬೇಕು. ಕೋಲಾರ ನಗರದ ಎಲ್ಲಾ ಪತ್ರಕರ್ತರು ಹಾಗೂ ಮಾಧ್ಯಮ ಮಿತ್ರರು ಕಾರ್ಯಗಾರಕ್ಕೆ ಭಾಗವಹಿಸಬೇಕೆಂದು ಕರ್ನಾಟಕ ವಿಭಾಗದ ಹೆಚ್ಚುವರಿ ಮಹಾ ನಿರ್ದೇಶಕರಾದ ಎಸ್.ಜಿ. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಪರೇಷನ್ ಟೈಗರ್

ಬೂದಿಕೋಟೆ

ಸಭೆಯ ನಂತರ, ಹಲವಾರು ಶಾಸಕರು ವೈಯಕ್ತಿಕ ಕೆಲಸ ಅಥವಾ ಪೂರ್ವ ನಿಗದಿತ ಕಾರ್ಯಗಳಿಂದಾಗಿ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಮಹಾ ವಿಕಾಸ್ ಅಘಾಡಿ ಸ್ಪಷ್ಟಪಡಿಸಿದರು. ಈ ಬೆಳವಣಿಗೆಯ ನಡುವೆ, ಆಪರೇಷನ್ ಟೈಗರ್ ಬಗ್ಗೆ ಚರ್ಚೆಗಳು ಮತ್ತೆ ತೀವ್ರಗೊಂಡಿವೆ. ಇತ್ತೀಚೆಗೆ ಉದ್ಧವ್ ಠಾಕ್ರೆ ಬಣದಿಂದ ಶಿಂಧೆ ಬಣಕ್ಕೆ ಕೆಲವು ಸಂಸದರು ಪಕ್ಷಾಂತರಗೊಂಡ ನಂತರ, ಮುಂದಿನ ಹಂತದ ಶಾಸಕರಲ್ಲಿ ವಿಭಜನೆಯ ಬಗ್ಗೆ ಹೇಳಲಾಗುತ್ತಿದೆ.

ಉದ್ಧವ್ ಠಾಕ್ರೆ ಬಣದಲ್ಲಿರುವ 20 ಶಾಸಕರಲ್ಲಿ 14 ರಿಂದ 16 ಮಂದಿ ತಮ್ಮ ಸಂಪರ್ಕದಲ್ಲಿದ್ದಾರೆ ಎಂದು ಶಿಂಧೆ ಬಣ ಹೇಳಿಕೊಂಡಿದೆ. ಆದಾಗ್ಯೂ, ಏಕನಾಥ್ ಶಿಂಧೆ ಮತ್ತು ಅವರ ನಾಯಕರು ತಾವು ಯಾವುದೇ ಶಾಸಕರನ್ನು ಮುರಿಯಲು ಪ್ರಯತ್ನಿಸುತ್ತಿಲ್ಲ, ಬದಲಿಗೆ ಶಾಸಕರು ಸ್ವತಃ ತಮ್ಮ ಸಂಪರ್ಕದಲ್ಲಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ. ಭವಿಷ್ಯದಲ್ಲಿ ಕೆಲವು ಶಾಸಕರು ತಮ್ಮೊಂದಿಗೆ ಸೇರಬಹುದು ಎಂಬ ಸುಳಿವು ಸಹ ನೀಡಿದರು.

ಈ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಸಂಜಯ್ ರಾವತ್, ತಮ್ಮ ಎಲ್ಲಾ ಶಾಸಕರು ಉದ್ಧವ್ ಠಾಕ್ರೆ ಅವರೊಂದಿಗೆ ಸಂಪರ್ಕದಲ್ಲಿದ್ದಾರೆ. ಸಭೆಗೆ ಹಾಜರಾಗದವರು ವೈಯಕ್ತಿಕ ಕಾರಣಗಳಿಗಾಗಿ ಗೈರುಹಾಜರಾಗಿದ್ದರು ಎಂದು ಹೇಳಿದರು. ಭವಿಷ್ಯದಲ್ಲಿ, ಶಿಂಧೆ ಬಣವು ದೇವೇಂದ್ರ ಫಡ್ನವೀಸ್ ಮತ್ತು ಅಮಿತ್ ಶಾ ಅವರನ್ನು ಮುರಿಯಲು ಪ್ರಯತ್ನಿಸುತ್ತಿದೆ.

# 'ಆಪರೇಷನ್ ಅಮಿಸ್ತಾದ್' ಆರಂಭ

ನವದೆಹಲಿ

ಉತ್ತರ ವೆನಿಜುವೆಲಾದಲ್ಲಿ ಸಂಭವಿಸಿದ ವಿನಾಶಕಾರಿ ಭೂಕಂಪದ ಹಿನ್ನೆಲೆಯಲ್ಲಿ ಭಾರತ ಮಾನವೀಯ ನೆರವಿನ ಕೈ ಚಾಚಿದ್ದು, "ಆಪರೇಷನ್ ಅಮಿಸ್ತಾದ್" ಹೆಸರಿನ ವಿಶೇಷ ಪರಿಹಾರ ಕಾರ್ಯಾಚರಣೆಯನ್ನು ಆರಂಭಿಸಿದೆ.

ಈ ಕಾರ್ಯಾಚರಣೆಯಡಿ ಭಾರತೀಯ ವಾಯುಪಡೆಯ ಎರಡು ಸಿ-17 ಗ್ಲೋಬ್‌ಮಾಸ್ಟರ್ ವಿಮಾನಗಳು ವೈದ್ಯಕೀಯ ಸಿಬ್ಬಂದಿ, ತುರ್ತು ಚಿಕಿತ್ಸಾ ಉಪಕರಣಗಳು, ಔಷಧಗಳು ಹಾಗೂ ಪರಿಹಾರ ಸಾಮಗ್ರಿಗಳೊಂದಿಗೆ ವೆನಿಜುವೆಲಾಗೆ ರವಾನೆಯಾಗಿವೆ. ಸುಮಾರು 41 ಸದಸ್ಯರ ವೈದ್ಯಕೀಯ ತಂಡ, ಫೀಲ್ಡ್ ಹಾಸ್ಪಿಟಲ್ ಘಟಕ, ಎರಡು ಅತ್ಯಾಧುನಿಕ 'ಭಿಷ್ಮ್ ಕ್ಯೂಬ್'ಗಳು ಹಾಗೂ 35 ಟನ್‌ಗಿಂತ ಹೆಚ್ಚು ಪರಿಹಾರ ಸಾಮಗ್ರಿಗಳನ್ನು ಕಳುಹಿಸಲಾಗಿದೆ.



ರಿಕ್ಟರ್ ಮಾಪಕದಲ್ಲಿ 7.2 ಮತ್ತು 7.5 ತೀವ್ರತೆಯ ಎರಡು ಭೂಕಂಪಗಳಿಂದ ತತ್ತರಿಸಿರುವ ವೆನಿಜುವೆಲಾದಲ್ಲಿ ರಕ್ಷಣಾ ಮತ್ತು ವೈದ್ಯಕೀಯ ನೆರವಿನ ಅಗತ್ಯತೆ ಹೆಚ್ಚಿರುವ ಹಿನ್ನೆಲೆಯಲ್ಲಿ ಭಾರತ ಜಾಗತಿಕ ಮಟ್ಟದಲ್ಲಿ ಮೊದಲ ಪ್ರತಿಕ್ರಿಯೆ ನೀಡಿದ ರಾಷ್ಟ್ರಗಳಲ್ಲಿ ಒಂದಾಗಿ ಹೊರಹೊಮ್ಮಿದೆ. 'ಅಮಿಸ್ತಾದ್' ಎಂಬ ಸ್ಪ್ಯಾನಿಷ್ ಪದಕ್ಕೆ 'ಸ್ನೇಹ' ಎಂಬ ಅರ್ಥವಿದ್ದು, ಈ ಕಾರ್ಯಾಚರಣೆ ಮೂಲಕ ಭಾರತ ತನ್ನ "ವಸುಧೈವ ಕುಟುಂಬಕಂ" ತತ್ವವನ್ನು ಮತ್ತೊಮ್ಮೆ ಜಗತ್ತಿಗೆ ಪರಿಚಯಿಸಿದೆ.

ಭಾರತೀಯ ಸೇನೆಯ ಪ್ರಸಿದ್ಧ 60 ಪ್ಯಾರಾ ಫೀಲ್ಡ್ ಹಾಸ್ಪಿಟಲ್‌ನ ವೈದ್ಯಾಧಿಕಾರಿಗಳನ್ನು ಒಳಗೊಂಡ ವೈದ್ಯಕೀಯ ತಂಡವು ಭೂಕಂಪ ಪೀಡಿತ ಪ್ರದೇಶಗಳಲ್ಲಿ ತುರ್ತು ಚಿಕಿತ್ಸೆ, ಗಾಯಾಳುಗಳ ನಿರ್ವಹಣೆ ಹಾಗೂ ಸಂಕೀರ್ಣ ಶಸ್ತ್ರಚಿಕಿತ್ಸೆಗಳನ್ನು ನಡೆಸಲಿದೆ.

# ಪ್ಲಾಸ್ಟಿಕ್ ಮರುಬಳಕೆ ಉದ್ಯಮಕ್ಕೆ ಹೊಸ ಉತ್ತೇಜನ

ಬೆಂಗಳೂರು

ಪ್ರಸ್ತುತ ಸುಮಾರು ರೂ.30 ಸಾವಿರ ಕೋಟಿ ಮೌಲ್ಯ ಹೊಂದಿರುವ ಭಾರತದ ಪ್ಲಾಸ್ಟಿಕ್ ಮರುಬಳಕೆ ಉದ್ಯಮಕ್ಕೆ ಹೊಸ ಉತ್ತೇಜನ ನೀಡುವ ಉದ್ದೇಶದಿಂದ ಪ್ಲಾಸ್ಟಿಕ್ ಮರುಬಳಕೆ ಮತ್ತು ಸುಸ್ಥಿರತೆ ಕುರಿತ ಮೂರನೇ ಜಾಗತಿಕ ಸಮ್ಮೇಳನ ಹಾಗೂ ಪ್ರದರ್ಶನ ಜುಲೈ 2ರಿಂದ 5ರವರೆಗೆ ನವದೆಹಲಿಯ ಭಾರತ ಮಂಟಪಂನಲ್ಲಿ ನಡೆಯಲಿದೆ.

ಸುಮಾರು 80 ವರ್ಷಗಳ ಇತಿಹಾಸ ಹೊಂದಿರುವ ಅಖಿಲ ಭಾರತ ಪ್ಲಾಸ್ಟಿಕ್ ತಯಾರಕರ ಸಂಘದ ವತಿಯಿಂದ ಈ ನಾಲ್ಕು ದಿನಗಳ ಕಾರ್ಯಕ್ರಮ ಆಯೋಜಿಸಲಾಗಿದ್ದು, ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳ ಸಹಯೋಗ ಮತ್ತು ಮಾರ್ಗದರ್ಶನದಲ್ಲಿ ನಡೆಯಲಿದೆ.

ಭಾರತದ ಪ್ಲಾಸ್ಟಿಕ್ ಮರುಬಳಕೆ ಕ್ಷೇತ್ರವು 2035ರ ವೇಳೆಗೆ ರೂ.60 ಸಾವಿರ ಕೋಟಿ ಮೌಲ್ಯ ತಲುಪುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಮರುಬಳಕೆ ತಂತ್ರಜ್ಞಾನ, ತ್ಯಾಜ್ಯ ನಿರ್ವಹಣೆ, ಸಂಪನ್ಮೂಲಗಳ ಸಮರ್ಪಕ ಬಳಕೆ ಹಾಗೂ ಸುಸ್ಥಿರ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಮಾವೇಶದಲ್ಲಿ ಮಹತ್ವದ ಚರ್ಚೆಗಳು ನಡೆಯಲಿವೆ.

ಸಂಘದ ಅಧ್ಯಕ್ಷ ಸುನಿಲ್ ಶಾ ಹಾಗೂ ಸಂಘಟನಾ ಸಮಿತಿಯ ಅಧ್ಯಕ್ಷ ಅರವಿಂದ್ ಮೆಹ್ತಾ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮವು ದೇಶದಲ್ಲಿ ಸುಸ್ಥಿರತೆಯ ಪರಿಸರ ವ್ಯವಸ್ಥೆಯನ್ನು ಜವಾಬ್ದಾರಿಯುತ ಸಂಪನ್ಮೂಲ ನಿರ್ವಹಣೆ ಮತ್ತು ವೃತ್ತಾಕಾರ ಆರ್ಥಿಕ ವ್ಯವಸ್ಥೆಗೆ ಉತ್ತೇಜನ ನೀಡುವ ಪ್ರಯತ್ನವೂ ಇದಾಗಿದೆ.

### ತುಮಕೂರಿನಲ್ಲಿ ಪಿಎಂ ವಿಶ್ವಕರ್ಮ ಯೋಜನೆಯಡಿ ಬ್ರ್ಯಾಂಡಿಂಗ್ ಮತ್ತು

# ಮಾರ್ಕೆಟಿಂಗ್ ಕುರಿತ ಜಾಗೃತಿ

ತುಮಕೂರು

ಭಾರತ ಸರ್ಕಾರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ಅಧೀನದಲ್ಲಿರುವ ಬೆಂಗಳೂರಿನ ಎಂಎಸ್‌ಎಂಇ ಅಭಿವೃದ್ಧಿ ಮತ್ತು ಸೌಲಭ್ಯ ಕಚೇರಿ ವತಿಯಿಂದ ಪಿಎಂ ವಿಶ್ವಕರ್ಮ ಯೋಜನೆಯಡಿ ಬ್ರ್ಯಾಂಡಿಂಗ್ ಮತ್ತು ಮಾರ್ಕೆಟಿಂಗ್ ಕುರಿತ ಒಂದು ದಿನದ ಜಾಗೃತಿ ಕಾರ್ಯಕ್ರಮವನ್ನು ಸೋಮವಾರ ತುಮಕೂರಿನ ಉಮಾಪ್ರಗತಿ ಪಿಯು ಕಾಲೇಜಿನಲ್ಲಿ ಆಯೋಜಿಸಲಾಯಿತು.

ಈ ಕಾರ್ಯಕ್ರಮವನ್ನು ನಾಕೋಫ ತರಬೇತಿ ಕೇಂದ್ರದ ಸಹಯೋಗದೊಂದಿಗೆ ಬೆಂಗಳೂರಿನ ಎಂಎಸ್‌ಎಂಇ ಅಭಿವೃದ್ಧಿ ಮತ್ತು ಸೌಲಭ್ಯ ಕಚೇರಿ ನಿರ್ದೇಶಕ ದೇವರಾಜ್ಕೆ ಅವರ ಮಾರ್ಗದರ್ಶನದಲ್ಲಿ ಹಾಗೂ ಜಿಲ್ಲಾ ಆಡಳಿತದ ಸಹಕಾರದೊಂದಿಗೆ ಆಯೋಜಿಸಲಾಯಿತು.

ಈ ಕಾರ್ಯಕ್ರಮದ ಉದ್ದೇಶವು ಪಿಎಂ ವಿಶ್ವಕರ್ಮ ಯೋಜನೆಯ ಮೂರನೇ ಹಂತವನ್ನು ಪೂರ್ಣಗೊಳಿಸಿರುವ ಫಲಾನುಭವಿಗಳಲ್ಲಿ ಬ್ರ್ಯಾಂಡಿಂಗ್, ಪ್ಯಾಕೇಜಿಂಗ್, ಮಾರ್ಕೆಟಿಂಗ್ ಹಾಗೂ ಹಣಕಾಸು ಸಾಕ್ಷರತೆಯ ಕುರಿತು ಅರಿವು ಮೂಡಿಸಿ, ಅವರ ಸಾಂಪ್ರದಾಯಿಕ ಉತ್ಪನ್ನಗಳ ಮಾರುಕಟ್ಟೆ ಮೌಲ್ಯ ಹಾಗೂ ಮೌಲ್ಯವರ್ಧನೆಯನ್ನು ಹೆಚ್ಚಿಸುವುದಾಗಿತ್ತು.

ಕಾರ್ಯಕ್ರಮದಲ್ಲಿ ರಫ್ತು ಉತ್ತೇಜನ ಮಂಡಳಿ(ಹಸ್ತಕಲಾ)ಯ ಪ್ರಾದೇಶಿಕ ಮುಖ್ಯಸ್ಥ ಪಿ.ಎಲ್. ಶ್ರೀದೇವಿ ಅವರು ಹಸ್ತ ಕಲಾ ಉತ್ಪನ್ನಗಳ ಬ್ರ್ಯಾಂಡಿಂಗ್ ಯಂತ್ರಗಳು ಹಾಗೂ ರಫ್ತು ಅವಕಾಶಗಳ ಕುರಿತು ಮಾಹಿತಿ ನೀಡಿದರು.

ಇಂಡಿಯನ್ ಇನ್ಸ್‌ಟ್ಯೂಟ್ ಆಫ್ ಪ್ಯಾಕೆಂಜಿಂಗ್ ಪ್ರಾದೇಶಿಕ ಅಧಿಕಾರಿ ಹರೀಶ್ ಕುಮಾರ್ ಆರ್. ಕೆ., ಅವರು, ವೈಜ್ಞಾನಿಕ ಪ್ಯಾಕೇಜಿಂಗ್ ಉತ್ಪನ್ನಗಳ ಆಕರ್ಷಕತೆ ಮತ್ತು ಮಾರುಕಟ್ಟೆ ಸ್ವೀಕಾರಾರ್ಹತೆಯನ್ನು ಹೇಗೆ ಹೆಚ್ಚಿಸುತ್ತದೆ ಎಂಬುದನ್ನು ವಿವರಿಸಿದರು.

ಚೈತನ್ಯಕಾಂಚಿ ಬೈಲ್ ಅವರು, ಹಣಕಾಸು ಸೇರ್ಪಡೆ, ಸಾಂಸ್ಥಿಕ ಸಾಲಸೌಲಭ್ಯಗಳು ಕುರಿತು ಮಾಹಿತಿ ನೀಡಿದರು. ಜೊತೆಗೆ, ತುಮಕೂರು ಜಿಲ್ಲೆಯಲ್ಲಿ ಪಿಎಂ ವಿಶ್ವಕರ್ಮ ಯೋಜನೆಯ ಸಾಧನೆಗಳನ್ನು ವಿವರಿಸಿ, ಫಲಾನುಭವಿಗಳಿಗೆ ತಮ್ಮ ಸಂಪೂರ್ಣ ಬೆಂಬಲವನ್ನು ವ್ಯಕ್ತಪಡಿಸಿದರು.

ರಾಜ್ಯಮಟ್ಟದ ಯೋಜನಾ ನಿರ್ವಹಣಾ ಘಟಕ(ಖಐಕಓಗ)ದ ಸಲಹೆಗಾರ ಶ್ರೀರೌನಕ್ರಾಯ್ ಅವರು, ಕೃತಕ ಬುದ್ಧಿಮತ್ತೆ, ಸ್ಮಾರ್ಟ್‌ಫೋನ್ ಹಾಗೂ ಡಿಜಿಟಲ್ ವೇದಿಕೆಗಳ ಬಳಕೆಯ ಕುರಿತು ಮಾಹಿತಿ ನೀಡಿದರು. ನಾಕೋಫ್ ವ್ಯವಸ್ಥಾಪಕ ದೀಪಕ್ಜಿ ಅವರು, ಉದ್ಯಮಶೀಲತೆ, ಇ-ಕಾಮರ್ಸ್, ಮಾರುಕಟ್ಟೆ ಪ್ರವೇಶ ಹಾಗೂ ಕರಕುಶಲಗಾರರಿಗೆ ಲಭ್ಯವಿರುವ ವ್ಯಾಪಾರ ಅಭಿವೃದ್ಧಿ ಅವಕಾಶಗಳ ಕುರಿತು ಉಪನ್ಯಾಸ ನೀಡಿದರು.

ತುಮಕೂರು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ನರೇಂದ್ರಬಾಬು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ರಾಜ್ಯ ಸರ್ಕಾರದ ವಿವಿಧ ಯೋಜನೆಗಳು ಹಾಗೂ ಅವುಗಳಿಂದ ಉದ್ಯಮಿಗಳು ಮತ್ತು ಕರಕುಶಲಗಾರರಿಗೆ ದೊರೆಯುವ ಪ್ರಯೋಜನಗಳ ಕುರಿತು ಫಲಾನುಭವಿಗಳನ್ನು ಉದ್ದೇಶಿಸಿ ಮಾತನಾಡಿದರು.

3ನೇ ಹಂತವನ್ನು ಪೂರ್ಣಗೊಳಿಸಿದ್ದ ಸುಮಾರು 125 ಪಿಎಂ ವಿಶ್ವಕರ್ಮ ಫಲಾನುಭವಿಗಳು, ಕಾರ್ಪೆಂಟರ್‌ಗಳು, ಮೇಸ್ತ್ರಿಗಳು, ಹೂಮಾಲೆ ತಯಾರಕರು, ಬುಟ್ಟಿ ತಯಾರಕರು ಹಾಗೂ ಇತರ ಸಾಂಪ್ರದಾಯಿಕ ಕರಕುಶಲಗಾರರು ಕಾರ್ಯಕ್ರಮದಲ್ಲಿ ಭಾಗವಹಿಸಿ, ತಜ್ಞರ ಮಾರ್ಗದರ್ಶನ ಹಾಗೂ ವಿವಿಧ ಸೌಲಭ್ಯಗಳಿಂದ ಪ್ರಯೋಜನ ಪಡೆದರು.

ಕಾರ್ಯಕ್ರಮವನ್ನು ಮರೋತಿದುಬೆ, ಸಹಾಯಕ ನಿರ್ದೇಶಕ ಸಂಯೋಜಿಸಿದ್ದು, ಅವರು ಎಂಎಸ್‌ಎಂಇ ಸಚಿವಾಲಯದ ವಿವಿಧ ಯೋಜನೆಗಳ ಕುರಿತು ಫಲಾನುಭವಿಗಳಿಗೆ ಮಾಹಿತಿ ನೀಡಿದರು.

ಸಹಾಯಕ ನಿರ್ದೇಶಕಶಿವಕುಮಾರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಫಲಾನುಭವಿಗಳನ್ನು ಉದ್ದೇಶಿಸಿ ಮಾತನಾಡಿದರು.



ಭಾರತವು ಪೋಲಿಯೋ ಮುಕ್ತ ರಾಷ್ಟ್ರವೆಂದು ಘೋಷಿಸಲ್ಪಟ್ಟಿದ್ದರೂ, ಕೆಲವು ದೇಶಗಳಲ್ಲಿ ಇನ್ನೂ ಪೋಲಿಯೋ ಪ್ರಕರಣಗಳು ಕಂಡುಬರುತ್ತಿದ್ದು, ಸೋಂಕು ಮರುಕಳಿಸುವ ಸಾಧ್ಯತೆಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ. ಆದ್ದರಿಂದ ಪ್ರತಿಯೊಬ್ಬ ಪೋಷಕರೂ ತಮ್ಮ ಮಕ್ಕಳಿಗೆ ಪ್ರತಿ ಸುತ್ತಿನಲ್ಲೂ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ದೇಶದ ಪೋಲಿಯೋ ಮುಕ್ತ ಸ್ಥಾನಮಾನವನ್ನು ಕಾಪಾಡುವಲ್ಲಿ ತಮ್ಮ ಕೊಡುಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಕರೆ ನೀಡಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಹಾಗೂ ಆರೋಗ್ಯ ಇಲಾಖೆ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಅರ್ಜೆಂಟೀನಾ ಫುಟ್‌ಬಾಲ್ ಜೊತೆ ಜಗದಾಳೆ ಸಹಯೋಗ!

ಬೆಂಗಳೂರು: ವಿಶ್ವಪ್ರಸಿದ್ಧ ಅರ್ಜೆಂಟೀನಾ ಫುಟ್‌ಬಾಲ್ ಅಸೋಸಿಯೇಷನ್‌ನ ಭಾರತದ ಅಧಿಕೃತ ಲೈಸೆನ್ಸಿ ಆಗಿ ಜಗದಾಳೆ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್ ಸಹಯೋಗವನ್ನು ಘೋಷಿಸಿದೆ. ಅರ್ಜೆಂಟೀನಾದ ಫುಟ್‌ಬಾಲ್‌ನ ಜಾಗತಿಕ ಪರಂಪರೆ ಮತ್ತು ಜಗದಾಳೆ ಸಂಸ್ಥೆಯ ಶ್ರೇಷ್ಠತೆ ಹಾಗೂ ನಾವೀನ್ಯತೆ ಈ ಪಾಲುದಾರಿಕೆಯ ಮೂಲಕ ಒಂದಾಗುತ್ತಿವೆ. ಇದು ಜಗದಾಳೆ ಕಂಪನಿಯ ಪ್ರಯಾಣದಲ್ಲಿ ಪ್ರಮುಖ ಮೈಲಿಗಲ್ಲಾಗಿದ್ದು, ವಿಶ್ವಾಸಾರ್ಹ ಸಂಬಂಧ ಮತ್ತು ಜವಾಬ್ದಾರಿಯುತ ವ್ಯವಹಾರದ ಮೂಲಕ ಮೌಲ್ಯವನ್ನು ಸೃಷ್ಟಿಸುವುದನ್ನು ಮುಂದುವರೆಸುತ್ತದೆ. ಇದರ ಪ್ರಮುಖ ಉತ್ಪನ್ನಗಳಲ್ಲಿ ಡಾರ್ಟ್ ಮಾತ್ರೆ ಇದ್ದು, ವಿಶ್ವಾಸಾರ್ಹ ನೋವು, ಜ್ವರ ನಿವಾರಕ ಮಾತ್ರೆ ಆಗಿದೆ. ಇದು ರೋಗಿಗಳ



ಆರೈಕೆಯಲ್ಲಿ ವೇಗ ಮತ್ತು ನಿಖರತೆಯನ್ನು ನೀಡುವ ಜಗದಾಳೆ ಸಂಸ್ಥೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಈ ಪೋರ್ಟ್‌ಫೋಲಿಯೊದಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ರೆಡಿ-ಟು-ಡ್ರಿಂಕ್ ಪೌಷ್ಟಿಕ ಪಾನೀಯ ಮಲ್ಮಿನಾ ಮತ್ತು ವೈಜ್ಞಾನಿಕವಾಗಿ ರೂಪಿಸಲಾದ ಹೈಡ್ರೇಶನ್ ಪಾನೀಯ ಒನೆಲ್ ಕೂಡ ಇದೆ. ವಿಶ್ವದ ಅತ್ಯಂತ ಪ್ರಸಿದ್ಧ, ಜನಪ್ರಿಯ ಫುಟ್‌ಬಾಲ್ ಒಕ್ಕೂಟಗಳಲ್ಲಿ ಒಂದಾದ ಎಎಫ್‌ಎ ಶ್ರೀಮಂತ ಕ್ರೀಡಾ ಪರಂಪರೆ, ಜಾಗತಿಕ ಮನ್ನಣೆ ಮತ್ತು ಬಲವಾದ ಅಂತರರಾಷ್ಟ್ರೀಯ ಅಸ್ತಿತ್ವವನ್ನು ಪ್ರತಿನಿಧಿಸುತ್ತದೆ.


ಈ ಸಹಯೋಗದ ಪ್ರಯೋಜನವನ್ನು ಪಡೆದುಕೊಂಡು, ಜಗದಾಳೆ ಸಂಸ್ಥೆಯು ಆರೋಗ್ಯ ವೃತ್ತಿಪರರು, ಕೆಮಿಸ್ಟ್‌ಗಳು, ಸಾಂಸ್ಥಿಕ ಗ್ರಾಹಕರು ಮತ್ತು ಮಾರಾಟ ತಂಡಗಳೊಂದಿಗೆ ಸಂಬಂಧವನ್ನು ಬಲಪಡಿಸಲು ಹಲವು ಉಪಕ್ರಮಗಳನ್ನು ಪರಿಚಯಿಸಲು ಯೋಜಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಜಗದಾಳೆ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್‌ನ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ರಾಜೇಶ್ ನಾಗರಾಜ ರಾವ್ ಜಗದಾಳೆ, ವಿಶ್ವದ ಅತ್ಯಂತ ಪ್ರಸಿದ್ಧ ಫುಟ್‌ಬಾಲ್ ಸಂಸ್ಥೆಗಳಲ್ಲಿ ಒಂದಾದ ಅರ್ಜೆಂಟೀನಾ ಫುಟ್‌ಬಾಲ್ ಅಸೋಸಿಯೇಷನ್ ಜೊತೆ ಈ ಸಹಯೋಗವನ್ನು ಪ್ರಾರಂಭಿಸಲು ನಾವು ಅತ್ಯಂತ ಹೆಮ್ಮೆಪಡುತ್ತೇವೆ ಎಂದು ಹೇಳಿದ್ದರೆ.

# 'ಕರ್ನಾಟಕದ ಕ್ರಿಪ್ಟೋ ಹೂಡಿಕೆದಾರರು ದೇಶದಲ್ಲೇ ಅತ್ಯಂತ ಶಿಸ್ತುಬದ್ಧರು'

ಬೆಂಗಳೂರು

ಮಾರುಕಟ್ಟೆಯ ಏರಿಳಿತದ ಸಂದರ್ಭದಲ್ಲೂ ಆತಂಕಕ್ಕೆ ಒಳಗಾಗದೆ, ದೀರ್ಘಕಾಲಿಕ ಹೂಡಿಕೆಗೆ ಆದ್ಯತೆ ನೀಡುವ ಮೂಲಕ ಕರ್ನಾಟಕದ ಕ್ರಿಪ್ಟೋ ಹೂಡಿಕೆದಾರರು ದೇಶದ ಅತ್ಯಂತ ಪರಿಪಕ್ವ ಮತ್ತು ಶಿಸ್ತುಬದ್ಧ ಹೂಡಿಕೆದಾರರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ ಎಂದು ಮಡ್ರೆಕ್ಸ್ ಸಂಸ್ಥೆಯ "ಹೌ ಇಂಡಿಯಾ ಟ್ರೇಡ್ಸ್ ಕ್ರಿಪ್ಟೋ-2026" ವರದಿ ತಿಳಿಸಿದೆ.




ದೇಶದ 22 ರಾಜ್ಯಗಳ 6,120ಕ್ಕೂ ಹೆಚ್ಚು ಸಕ್ರಿಯ ಕ್ರಿಪ್ಟೋ ಹೂಡಿಕೆದಾರರು ಮತ್ತು ವಹಿವಾಟುದಾರರನ್ನು ಒಳಗೊಂಡ ಸಮೀಕ್ಷೆಯಲ್ಲಿ, ಕರ್ನಾಟಕದ ಕೇವಲ 3.2 ಶೇಕಡಾ ಮಂದಿ ಮಾತ್ರ ಮಾರುಕಟ್ಟೆಯ ತೀವ್ರ ಏರಿಳಿತದ ಸಂದರ್ಭದಲ್ಲಿ ಆತಂಕದಿಂದ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂಬುದು ಬಹಿರಂಗವಾಗಿದೆ. ರಾಷ್ಟ್ರೀಯ ಸರಾಸರಿ 9 ಶೇಕಡಾಕ್ಕೆ ಹೋಲಿಸಿದರೆ ಇದು ಗಮನಾರ್ಹವಾಗಿ ಕಡಿಮೆ ಪ್ರಮಾಣವಾಗಿದೆ.

ರಾಜ್ಯದ 51 ಶೇಕಡಾ ಕ್ರಿಪ್ಟೋ ಹೂಡಿಕೆದಾರರು ದೀರ್ಘಕಾಲಿಕ ಹೂಡಿಕೆದಾರರಾಗಿದ್ದು, ಖರೀದಿಸಿದ ಆಸ್ತಿಯನ್ನು ದೀರ್ಘಾವಧಿಯವರೆಗೆ ಉಳಿಸಿಕೊಳ್ಳುವ ತಂತ್ರವನ್ನು ಅನುಸರಿಸುತ್ತಿದ್ದಾರೆ. ರಾಷ್ಟ್ರೀಯ ಮಟ್ಟದಲ್ಲಿ ಈ ಪ್ರಮಾಣ 41.2 ಶೇಕಡಾ ಮಾತ್ರವಾಗಿದೆ..

# ಅಡಿಕೆ ಬೆಳೆಗಾರರಿಗೆ ತೀವ್ರ ಸಂಕಷ್ಟ...!: ಭಾರೀ ಒಡೆತ ಸಾಧ್ಯತೆ

ಬೆಂಗಳೂರು

ರಾಜ್ಯದಲ್ಲಿ ಮಳೆ ಕೊರತೆಯಿಂದ ಬೆಳೆ ಉಳಿಸಿಕೊಳ್ಳಲು ರೈತರು ಹರಸಾಹಸ ಪಡುತ್ತಿರುವ ನಡುವೆಯೇ, ಅಡಿಕೆ ಬೆಳೆಗಾರರಿಗೆ ಮತ್ತೊಂದು ದೊಡ್ಡ ಸಂಕಷ್ಟ ಎದುರಾಗಿದೆ. ಕರ್ನಾಟಕದಿಂದ ಮಹಾರಾಷ್ಟ್ರ ಮಾರ್ಗವಾಗಿ ಉತ್ತರ ಭಾರತದ ವಿವಿಧ ರಾಜ್ಯಗಳಿಗೆ ಸಾಗಾಟವಾಗುವ ಅಡಿಕೆ ಲಾರಿಗಳನ್ನು ಮಹಾರಾಷ್ಟ್ರ ಸರ್ಕಾರ ತಡೆಹಿಡಿಯುತ್ತಿರುವುದರಿಂದ ಅಡಿಕೆ ವ್ಯಾಪಾರ ಕುಂಠಿತಗೊಂಡಿದ್ದು, ಸಾವಿರಾರು ರೈತರು ಹಾಗೂ ವ್ಯಾಪಾರಿಗಳು ಆತಂಕಕ್ಕೊಳಗಾಗಿದ್ದಾರೆ.

ಕರ್ನಾಟಕವು ದೇಶದ ಅತಿದೊಡ್ಡ ಅಡಿಕೆ ಉತ್ಪಾದಕ ರಾಜ್ಯವಾಗಿದ್ದು, ಸುಮಾರು 6.7 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯಲಾಗುತ್ತಿದೆ.

ವಾರ್ಷಿಕವಾಗಿ 10 ರಿಂದ 11 ಲಕ್ಷ ಟನ್ ಅಡಿಕೆ ಉತ್ಪಾದನೆಯಾಗುತ್ತಿದ್ದು, ದೇಶದ ಒಟ್ಟು ಅಡಿಕೆ ಉತ್ಪಾದನೆಯಲ್ಲಿ ಕರ್ನಾಟಕದ ಪಾಲು ಅತ್ಯಧಿಕವಾಗಿದೆ. ಅಡಿಕೆ ಕ್ಷೇತ್ರದ ಮಾರುಕಟ್ಟೆ ಮೌಲ್ಯ ಸುಮಾರು 58,664 ಕೋಟಿ ರೂ. ಎಂದು ಅಂದಾಜಿಸಲಾಗಿದ್ದು, ಲಕ್ಷಾಂತರ ರೈತರು, ಕಾರ್ಮಿಕರು, ವ್ಯಾಪಾರಿಗಳು ಹಾಗೂ ಸಾಗಾಣಿಕೆದಾರರ ಜೀವನೋಪಾಯ ಈ ಬೆಳೆಯ ಮೇಲೆ ಅವಲಂಬಿತವಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಶಿರಸಿ ಸೇರಿದಂತೆ ರಾಜ್ಯದ ಹಲವೆಡೆ ಅಡಿಕೆ ಪ್ರಮುಖ ವಾಣಿಜ್ಯ ಬೆಳೆಯಾಗಿದೆ. ಅತಿವೃಷ್ಟಿ, ಅನಾವೃಷ್ಟಿ ಹಾಗೂ ವಿವಿಧ ರೋಗಬಾಧೆಗಳ ನಡುವೆಯೂ ಬೆಳೆ ಉಳಿಸಿಕೊಂಡ ರೈತರು ಇದೀಗ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ನಿರೀಕ್ಷಿಸುತ್ತಿದ್ದ ಸಮಯದಲ್ಲೇ ಮಹಾರಾಷ್ಟ್ರ ಸರ್ಕಾರದ ಕ್ರಮ ಹೊಸ ಆತಂಕ ಹುಟ್ಟಿಸಿದೆ.

ಅಡಿಕೆಯಲ್ಲಿ ರಾಸಾಯನಿಕ ಅಂಶಗಳಿರುವ ಶಂಕೆಯನ್ನು ಮುಂದಿಟ್ಟುಕೊಂಡು ಮಹಾರಾಷ್ಟ್ರ ಸರ್ಕಾರ ಒಂದು ವರ್ಷದವರೆಗೆ ಅಡಿಕೆ ದಾಸ್ತಾನು, ವಹಿವಾಟು ಹಾಗೂ ಸಾಗಾಟದ ಮೇಲೆ ನಿರ್ಬಂಧ ವಿಧಿಸಿದೆ ಎನ್ನಲಾಗಿದೆ. ಇದರ ಪರಿಣಾಮವಾಗಿ ಕರ್ನಾಟಕದಿಂದ ಮಹಾರಾಷ್ಟ್ರ ಮೂಲಕ ಉತ್ತರ ಭಾರತಕ್ಕೆ ತೆರಳುತ್ತಿದ್ದ ಸಾವಿರಕ್ಕೂ ಹೆಚ್ಚು ಅಡಿಕೆ ಲಾರಿಗಳನ್ನು ಕಳೆದ ಎರಡು ವಾರಗಳಿಂದ ತಡೆಹಿಡಿಯಲಾಗಿದೆ.

# ರಸ್ತೆ ಬದಿಯ ಮರಗಳ ಕೊಂಬೆ ಕಟಾವು

ಬೂದಿಕೋಟೆ

ಬಂಗಾರಪೇಟೆ-ಬೂದಿಕೋಟೆ ಮುಖ್ಯ ರಸ್ತೆಯ ಪಕ್ಕದಲ್ಲಿರುವ ಸುಮಾರು 10ಕ್ಕೂ ಹೆಚ್ಚು ಮರಗಳ ದೊಡ್ಡ ಕೊಂಬೆಗಳನ್ನು ಬೆಸ್ಕಾಂ ಇಲಾಖೆ ಸಿಬ್ಬಂದಿ ಅತಿಯಾಗಿ ಕತ್ತರಿಸಿರುವ ಘಟನೆ ಸಾರ್ವಜನಿಕ ಆಕ್ರೋಶಕ್ಕೆ ಕಾರಣವಾಗಿದೆ.

ವಿದ್ಯುತ್ ತಂತಿಗಳಿಗೆ ಅಡ್ಡಿಯಾಗುತ್ತವೆ ಎಂಬ ಕಾರಣ ನೀಡಿ, ಬೂದಿಕೋಟೆ ವಿಭಾಗದ ಇಂಜಿನಿಯರ್ ಮೋಹನ್ ಅವರ ನೇತೃತ್ವದಲ್ಲಿ ಸಿಬ್ಬಂದಿ ಪೆಟ್ರೋಲ್ ಬಂಕ್, ಸಿವಿ ಇಂಟರ್‌ನ್ಯಾಷನಲ್ ಶಾಲೆ ಹಾಗೂ ಮಧ್ಯದಂಗಡಿ ನಡುವಿನ ರಸ್ತೆ ಬದಿಯ ಮರಗಳ ಕೊಂಬೆಗಳನ್ನು ಕಡಿತಗೊಳಿಸಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಆದರೆ ಮರಗಳ ಕೊಂಬೆಗಳನ್ನು ವೈಜ್ಞಾನಿಕ ವಿಧಾನದಲ್ಲಿ ಕತ್ತರಿಸದೆ, ಮರಗಳ ಸ್ವರೂಪ ಮತ್ತು ಬೆಳವಣಿಗೆಗೆ ಹಾನಿಯಾಗುವ ರೀತಿಯಲ್ಲಿ ಅತಿಯಾಗಿ ಕಡಿತ



ಮಾಡಲಾಗಿದೆ ಎಂದು ಪರಿಸರ ಪ್ರೇಮಿಗಳು ಹಾಗೂ ಸ್ಥಳೀಯರುಹಲವು ವರ್ಷಗಳಿಂದ ಬೆಳೆದು ನಿಂತಿದ್ದ ಈ ಮರಗಳು ಪ್ರಯಾಣಿಕರಿಗೆ ನೆರಳು ನೀಡುವುದರ ಜೊತೆಗೆ ಪರಿಸರ ಸಮತೋಲನ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದವು ಎಂದು ಅವರು ಹೇಳಿದ್ದಾರೆ. ವಿದ್ಯುತ್ ತಂತಿಗಳಿಗೆ ಅಡ್ಡಿಯಾಗುವ ಭಾಗಗಳನ್ನು ಮಾತ್ರ ತೆರವುಗೊಳಿಸಬಹುದಾಗಿತ್ತು, ಆದರೆ ಮರಗಳೇ ಹಾನಿಯಾಗುವಂತೆ ಕತ್ತರಿಸಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತವಾಗಿದೆ.

ಈ ಸಂಬಂಧ ಅರಣ್ಯ ಇಲಾಖೆ ಅನುಮತಿ ಪಡೆದಿದ್ದಾರೆಯೇ ಎಂಬ ಪ್ರಶ್ನೆಯೂ ಸಾರ್ವಜನಿಕರಲ್ಲಿ ಮೂಡಿದ್ದು, ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ. ನಿಯಮ ಉಲ್ಲಂಘನೆ ಕಂಡುಬಂದರೆ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ಪರಿಸರ ಹಾನಿಯಾಗದಂತೆ ಸರ್ಕಾರ ಮತ್ತು ಸಂಬಂಧಿತ ಇಲಾಖೆಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪರಿಸರ ಹಿತಚಿಂತಕರು ಮನವಿ ಮಾಡಿದ್ದಾರೆ.

